ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ:080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು-560001.

ಸಂಖ್ಯೆ:ಕಾಶಿಇ/ಶೈವಿ/03/ಸುತ್ತೋಲೆ/2017-18

ದಿನಾಂಕ:04.05.2017

# ಸುತ್ತೋಲೆ

ವಿಷಯ: ದಿನಾಂಕ:04-05-2017 ರಿಂದ 07-05-2017 ರವರೆಗೆ ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ "ಬೆಂಗಳೂರು ಆರೋಗ್ಯ ಉತ್ಸವ" ಕಾರ್ಯಕ್ರಮದಲ್ಲಿ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಪತ್ರ ಸಂಖ್ಯೆ: ಇಡಿ 01 ಯುಇಸಿ 2017, ದಿನಾಂಕ:28-04-2017. .
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ರವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಆಕುಕ 217 ಪ್ರಕಾ 2017, ದಿನಾಂಕ:27.03.2017.

* * * * * * * *

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಟಿ.ವಿ. ಹೌಸ್‌ವರ್ಕ್ ಪ್ರೈ.ಲಿಮಿಟೆಡ್, ಬೆಂಗಳೂರು ಇವರ ಸಹಯೋಗದೊಂದಿಗೆ ದಿನಾಂಕ:04-05-2017 ರಿಂದ 07-05-2017 ರವರೆಗೆ ಬೆಂಗಳೂರಿನ ಅರಮನೆ ಮೈದಾನದಲ್ಲಿ "ಬೆಂಗಳೂರು ಆರೋಗ್ಯ ಉತ್ಸವ" ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, 'ಬೆಂಗಳೂರನ್ನು ಭಾರತದ ಆರೋಗ್ಯ ರಾಜಧಾನಿಯನ್ನಾಗಿ' ಮಾಡುವ ಧ್ಯೇಯೋದ್ದೇಶ ಹೊಂದಿರುತ್ತದೆ. ಸದರಿ ಕಾರ್ಯಕ್ರಮದಲ್ಲಿ ಔಷಧ ಸಂಸ್ಥೆಗಳು, ಪ್ರಮುಖ ಆಸ್ಪತ್ರೆಗಳು, ವೈದ್ಯಕೀಯ ಶಿಕ್ಷಣ ಸಂಸ್ಥೆಗಳು, ಉಪಕರಣಗಳ ತಯಾರಕರುಗಳು ಹೀಗೆ ಹಲವಾರು ಪ್ರಮುಖ ಸಂಸ್ಥೆಗಳು ಭಾಗಿಯಾಗಲಿದ್ದು, ಆರೋಗ್ಯದ ಕುರಿತು ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಉಪಯುಕ್ತ ಪ್ರದರ್ಶನಗಳು, ಸ್ಪರ್ಧೆಗಳು, ಸಮ್ಮೇಳನಗಳು, ಫಿಟ್‌ನೆಸ್ ಬಗ್ಗೆ ಜಾಗೃತಿ, ಮನರಂಜನಾ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.

ಈ ಹಿನ್ನೆಲೆಯಲ್ಲಿ ದಿನಾಂಕ:04-05-2017 ರಿಂದ 07-05-2017 ರವರೆಗೆ ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ "ಬೆಂಗಳೂರು ಆರೋಗ್ಯ ಉತ್ಸವ"ದಲ್ಲಿ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿ, ಈ ಕಾರ್ಯಕ್ರಮವನ್ನು ಸದುಪಯೋಗಪಡಿಸಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

*ಕಾಲೇಜು ಶಿಕ್ಷಣ ನಿರ್ದೇಶಕರು(ಪ್ರ)*

**ಇವರಿಗೆ;**

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2) ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.

**ಪ್ರತಿಯನ್ನು:**

1) ಆಯುಕ್ತರು, ನಿರ್ದೇಶಕರು, ಹೆಚ್ಚುವರಿ ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಜಂಟಿ ನಿರ್ದೇಶಕರು ರವರ ಆಪ್ತ ಶಾಖೆ, ಕಾ.ಶಿ.ಆಯುಕ್ತರ ಕಛೇರಿ, ಬೆಂಗಳೂರು.
2) ಕಛೇರಿ ಪ್ರತಿ.